# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 248
ಸದಸ್ಯರ ಹೆಸರು : ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು : ಮಾನ್ಯ ಸಣ್ಣ ಕೈಗಾರಿಕೆ ಸಚಿವರು
ಉತ್ತರಿಸಬೇಕಾದ ದಿನಾಂಕ : 11.07.2018

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಮತ್ತು ಆಟೋನಗರ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು? | ರಾಯಚೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಮತ್ತು ಆಟೋನಗರ ನಿರ್ಮಾಣ ಮಾಡಲು ಸರ್ಕಾರ ಈ ಕೆಳಗಿನ ಕ್ರಮಗಳನ್ನು ಕೈಗೊಂಡಿದೆ.<br><br>**ಕೈಗಾರಿಕಾ ಪ್ರದೇಶ: (ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿ) :**<br><br>1. ರಾಯಚೂರು ಬೆಳವಣಿಗೆ ಕೇಂದ್ರದಲ್ಲಿ 1745.31 ಎಕರೆಗಳ ಅಭಿವೃದ್ಧಿಪಡಿಸಲಾಗಿದ್ದು 158 ನಿವೇಶನಗಳನ್ನು ಹಂಚಿಕೆ ಮಾಡಲಾಗಿರುತ್ತದೆ.<br>2. ರಾಯಚೂರು ಕೈಗಾರಿಕಾ ಪ್ರದೇಶದಲ್ಲಿ 155.88 ಎಕರೆ ಜಮೀನನ್ನು ಅಭಿವೃದ್ಧಿಪಡಿಸಲಾಗಿದ್ದು 64 ನಿವೇಶನಗಳನ್ನು ಹಂಚಿಕೆ ಮಾಡಲಾಗಿರುತ್ತದೆ.<br>3. ಮಾನ್ವಿ ಕೈಗಾರಿಕಾ ಪ್ರದೇಶದಲ್ಲಿ 48.00 ಎಕರೆ ಜಮೀನನ್ನು ಅಭಿವೃದ್ಧಿಪಡಿಸಲಾಗಿದ್ದು 116 ನಿವೇಶನಗಳನ್ನು ಹಂಚಿಕೆ ಮಾಡಲಾಗಿರುತ್ತದೆ.<br>4. ಮಾನ್ವಿ ಕೈಗಾರಿಕಾ ಪ್ರದೇಶದಲ್ಲಿ ಆಟೋ ನಗರಕ್ಕಾಗಿ 11.70 ಜಮೀನನ್ನು ಅಭಿವೃದ್ಧಿಪಡಿಸಲಾಗಿದ್ದು 17 ನಿವೇಶನಗಳನ್ನು ಹಂಚಿಕೆ ಮಾಡಲಾಗಿರುತ್ತದೆ.<br>5. ಹೊಸದಾಗಿ ಸಣ್ಣ ಕೈಗಾರಿಕೆಗಳ ಸ್ಥಾಪನೆಗಾಗಿ ರಾಯಚೂರು ತಾಲ್ಲೂಕಿನ ಸಿಂಗನೋಡಿ ಹಾಗೂ ಬೋಳಂದೊಡ್ಡಿ ಗ್ರಾಮಗಳ ವಿವಿಧ ಸರ್ವೆ ನಂಬರ್‌ಗಳಲ್ಲಿ 576 ಎಕರೆ ಜಮೀನನ್ನು ಗುರುತಿಸಿ ಭೂಸ್ವಾಧೀನ ಪ್ರಕ್ರಿಯೆ ಸಲುವಾಗಿ ಕೆಐಎಡಿಬಿ ಕೇಂದ್ರ ಕಛೇರಿ ಬೆಂಗಳೂರು ಇವರಿಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. |

**ಕೈಗಾರಿಕಾ ವಸಾಹತು: (ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ) :**

1. ರಾಯಚೂರು ನಗರದಲ್ಲಿ 1974ರಲ್ಲಿಯೇ 25 ಎಕರೆ ವಿಸ್ತೀರ್ಣದ ಭೂಮಿಯನ್ನು ಪಡೆದುಕೊಂಡು ಮೂಲಭೂತ ಸೌಕರ್ಯಗಳೊಂದಿಗೆ ಕೈಗಾರಿಕಾ ವಸಾಹತುವನ್ನು ಸ್ಥಾಪಿಸಲಾಗಿದೆ. ಸದರಿ ಕೈಗಾರಿಕಾ ವಸಾಹತುವಿನಲ್ಲಿ 51 ಕೈಗಾರಿಕಾ ಮಳಿಗೆಗಳನ್ನು ಹಾಗೂ 68 ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ.
2. ರಾಯಚೂರು ನಗರದ ಯರಮರಸ್‌ನಲ್ಲಿ 1974ರಲ್ಲಿ 10.00 ಎಕರೆ ವಿಸ್ತೀರ್ಣದ ಭೂಮಿಯನ್ನು ಪಡೆದುಕೊಂಡು ಮೂಲಭೂತ ಸೌಕರ್ಯಗಳೊಂದಿಗೆ ಕೈಗಾರಿಕಾ ವಸಾಹತುವನ್ನು ಸ್ಥಾಪಿಸಲಾಗಿದೆ. ಸದರಿ ಕೈಗಾರಿಕಾ ವಸಾಹತುವಿನಲ್ಲಿ 4 ಕೈಗಾರಿಕಾ ಮಳಿಗೆ ಮತ್ತು 44 ಕೈಗಾರಿಕಾ ನಿವೇಶನಗಳನ್ನು ಅರ್ಹ ಸಣ್ಣ ಕೈಗಾರಿಕೋದ್ಯಮಿಗಳಿಗೆ ಹಂಚಿಕೆ ಮಾಡಲಾಗಿದೆ.

**ಕಳೆದ ಮೂರು ವರ್ಷಗಳಲ್ಲಿ ರಾಯಚೂರು ಜಿಲ್ಲೆಗೆ ಕೈಗಾರಿಕಾ ವಲಯಕ್ಕೆ ನೀಡಲಾದ ಸಹಾಯಧನದ ವಿವರಗಳು:**

1. ಕರ್ನಾಟಕ ಕೈಗಾರಿಕಾ ನೀತಿ 2014-19 ಅಡಿಯಲ್ಲಿ 222 ಕೈಗಾರಿಕಾ ಘಟಕಗಳಿಗೆ ರೂ. 5004.56 ಲಕ್ಷ ಸಹಾಯಧನ ಬಿಡುಗಡೆ ಮಾಡಲಾಗಿದೆ.
2. ಪ್ರಧಾನಮಂತ್ರಿಯವರ ಉದ್ಯೋಗ ಸೃಜನೆ ಯೋಜನೆಯಡಿಯಲ್ಲಿ 199 ಫಲಾನುಭವಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ರೂ.532.48 ಲಕ್ಷ ಸಹಾಯಧನ ಬಿಡುಗಡೆ ಮಾಡಲಾಗಿದೆ.
3. ಮುಖ್ಯಮಂತ್ರಿಯವರ ಸ್ವಯಂ ಉದ್ಯೋಗ ಸೃಜನೆ ಯೋಜನೆಯಡಿಯಲ್ಲಿ 69 ಘಟಕಗಳಿಗೆ ಸಾಲ ಮಂಜೂರು ಮಾಡಲಾಗಿದ್ದು 13 ಸ್ವಯಂ ಉದ್ಯೋಗ ಪ್ರಾರಂಭಿಸಿದ ಫಲಾನುಭವಿಗಳಿಗೆ ರೂ. 24.01 ಲಕ್ಷ ಸಹಾಯಧನ ಬಿಡುಗಡೆ ಮಾಡಲಾಗಿದೆ.
4. 7 ಸ್ವಯಂ ಉದ್ಯೋಗ ಘಟಕಗಳನ್ನು ಸ್ಥಾಪಿಸಿದ ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ರೂ.23.70 ಲಕ್ಷ ಸಹಾಯಧನ ಬಿಡುಗಡೆ ಮಾಡಲಾಗಿದೆ.

**ಸಿಐ 66 ಸಿಎಸ್‌ಸಿ 2018**

[ಎಸ್.ಆರ್. ಶ್ರೀನಿವಾಸ್ (ವಾಸು)]
ಸಣ್ಣ ಕೈಗಾರಿಕೆ ಸಚಿವರು